ಕರ್ನಾಟಕ ಸರ್ಕಾರ

ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ:ಕಾಶಿಇ:54:ಸುತ್ತೋಲೆ:2021-22/ತವಿ

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ:19.02.2024

ಇವರಿಗೆ,
ಜಂಟಿ ನಿರ್ದೇಶಕರು,
ಪ್ರಾದೇಶಿಕ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ,
ಬೆಂಗಳೂರು/ಮೈಸೂರು/ಧಾರವಾಡ
ಶಿವಮೊಗ್ಗ/ಮಂಗಳೂರು/ಗುಲ್ಬರ್ಗಾ.

ಮಾನ್ಯರೇ,

ವಿಷಯ: ಸರ್ಕಾರದ ಅಧಿಸೂಚನೆ/ನಡವಳಿಗಳು/ಸುತ್ತೋಲೆಗಳನ್ನು ಪರಿಚಲಿಸುವ ಬಗ್ಗೆ.

** ** **

ಸರ್ಕಾರದಿಂದ ಜಾರಿಗೊಳಿಸಿರುವ/ಹೊರಡಿಸಲಾಗಿರುವ ಈ ಕೆಳಕಂಡ ಸರ್ಕಾರದ ನಡವಳಿಗಳು/ ಆದೇಶ/ ಸುತ್ತೋಲೆ/ ಅಧಿಸೂಚನೆಯನ್ನು ಈ ಪತ್ರದೊಂದಿಗೆ ಲಗತ್ತಿಸಲಾಗಿದ್ದು, ಅಗತ್ಯತೆ ಅನುಸಾರ ಇವುಗಳನ್ನು ತಮ್ಮ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ/ಖಾಸಗಿ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಸೂಕ್ತ ಕ್ರಮಕ್ಕಾಗಿ ಪರಿಚಲಿಸುವಂತೆ ಸೂಚಿಸಲಾಗಿದೆ.

| ಕ್ರ.ಸಂ | ಪತ್ರಸಂಖ್ಯೆ | ವಿಷಯ | ಷರಾ |
|---|---|---|---|
| 01 | ಸರ್ಕಾರದ ಆದೇಶ ಸಂಖ್ಯೆ: ಆಇ-ಪಿಇಎನ್/99/2023, ಬೆಂಗಳೂರು, ದಿನಾಂಕ:24.01.2024. | ದಿನಾಂಕ:01.04.2006ರ ಪೂರ್ವದಲ್ಲಿನ ನೇಮಕಾತಿ ಅಧಿಸೂಚನೆಗಳ ಮೂಲಕ ಆಯ್ಕೆ ಹೊಂದಿ ಆ ದಿನಾಂಕ ದಂದು ಅಥವಾ ನಂತರದಲ್ಲಿ ರಾಜ್ಯ ಸರ್ಕಾರದ ಸೇವೆಗೆ ಸೇರಿದ ನೌರರರನ್ನು ಹಳೆಯ ಡಿಫೈನ್ಡ್ ಪಿಂಚಣಿ ಯೋಜನೆಗೆ ಒಳಪಡಿಸುವ ಕುರಿತು. | 04 ಪುಟಗಳು |

ಅಡಕ:ಮೇಲಿನಂತೆ

ತಮ್ಮ ವಿಶ್ವಾಸಿ

ಮುಖ್ಯ ಆಡಳಿತಾಧಿಕಾರಿಗಳು
ಕಾಲೇಜು ಶಿಕ್ಷಣ ಇಲಾಖೆ

ಇವರಿಗೆ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ:

1. ಕೇಂದ್ರ ಕಛೇರಿಯ ಎಲ್ಲಾ ವಿಭಾಗಗಳ ಮುಖ್ಯಸ್ಥರುಗಳಿಗೆ.
2. ಮಾಹಿತಿ ಅಧಿಕಾರಿಗಳು, ಮಾಹಿತಿ & ತಂತ್ರಜ್ಞಾನ ವಿಭಾಗ, ಕಾಲೇಜು ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ಬೆಂಗಳೂರು-ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
3. ಕಛೇರಿ ಪ್ರತಿ.

ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ

| | | |
|---|---|---|
| ಭಾಗ – ೧<br>Part – I | ಬೆಂಗಳೂರು, ಶುಕ್ರವಾರ, ೦೨, ಫೆಬ್ರವರಿ, ೨೦೨೪(ಮಾಘ, ೧೩, ಶಕವರ್ಷ, ೧೯೪೫)<br>BENGALURU, FRIDAY, 02, FEBRUARY, 2024(MAGHA, 13, SHAKAVARSHA, 1945) | ನಂ. ೫೪<br>No. 54 |


## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ದಿನಾಂಕ: 01.04.2006ರ ಪೂರ್ವದಲ್ಲಿನ ನೇಮಕಾತಿ ಅಧಿಸೂಚನೆಗಳ ಮೂಲಕ ಆಯ್ಕೆ ಹೊಂದಿ ಆ ದಿನಾಂಕದಂದು ಅಥವಾ ನಂತರದಲ್ಲಿ ರಾಜ್ಯ ಸರ್ಕಾರದ ಸೇವೆಗೆ ಸೇರಿದ ನೌಕರರನ್ನು ಹಳೆಯ ಡಿಫೈನ್ಡ್ ಪಿಂಚಣಿ ಯೋಜನೆಗೆ ಒಳಪಡಿಸುವ ಕುರಿತು.

ಓದಲಾಗಿದೆ:

1. ಸರ್ಕಾರಿ ಆದೇಶ ಸಂಖ್ಯೆ :ಆಇ (ವಿಶೇಷ) 04 ಪಿಇಟಿ 2005, ದಿನಾಂಕ:31.03.2006.
2. ಸರ್ಕಾರಿ ಆದೇಶ ಸಂಖ್ಯೆ:ಆಇ (ವಿಶೇಷ) 28 ಪಿಇಎನ್ 2009, ದಿನಾಂಕ:29.03.2010.
3. ಸರ್ಕಾರಿ ಆದೇಶ ಸಂಖ್ಯೆ: DPAR 109 SPP 2023, ದಿನಾಂಕ:18.10.2023.

******

<u>ಪ್ರಸ್ತಾವನೆ :</u>

ಓದಲಾದ ಕ್ರಮ ಸಂಖ್ಯೆ(1)ರ ಸರ್ಕಾರಿ ಆದೇಶದನ್ವಯ ದಿನಾಂಕ: 01.04.2006 ರಂದು ಹಾಗೂ ತದನಂತರ ಸರ್ಕಾರಿ ಸೇವೆಗೆ ಸೇರಿದ ಎಲ್ಲಾ ಸರ್ಕಾರಿ ನೌಕರರಿಗೆ ನೂತನ ಅಂಶದಾಯಿ ಕೊಡುಗೆ ಯೋಜನೆಯನ್ನು (ರಾಷ್ಟ್ರೀಯ ಪಿಂಚಣಿ ಯೋಜನೆ) ಕಡ್ಡಾಯವಾಗಿ ಜಾರಿಗೊಳಿಸಲಾಗಿದೆ.

ಓದಲಾದ ಕ್ರಮ ಸಂಖ್ಯೆ (2)ರ ಸರ್ಕಾರಿ ಆದೇಶದಲ್ಲಿನ ಸೂಚನೆಗಳನ್ವಯ ರಾಷ್ಟ್ರೀಯ ಪಿಂಚಣಿ ಯೋಜನೆಯನ್ನು ಜಾರಿಗೊಳಿಸುವ ಮಾರ್ಗಸೂಚಿಯನ್ನು ರೂಪಿಸುವುದರೊಂದಿಗೆ ಈ ಯೋಜನೆಯನ್ನು ಕಾರ್ಯಗತಗೊಳಿಸಲಾಗಿದೆ.

ಕೇಂದ್ರ ಸರ್ಕಾರವು ತನ್ನ ನೌಕರರಿಗೆ ದಿನಾಂಕ:22.12.2003ರ ಮೊದಲು ನೇಮಕಾತಿ/ನೇಮಕಾತಿಗಾಗಿ ಜಾಹೀರಾತು/ಅಧಿಸೂಚಿಸಲಾದ ಹುದ್ದೆ ಅಥವಾ ರಿಕ್ತ ಸ್ಥಾನದ ಎದುರಾಗಿ ನೇಮಕಾತಿ ಹೊಂದಿ ದಿನಾಂಕ:01.01.2004ರಂದು ಅಥವಾ ತದನಂತರ ಸೇವೆಗೆ ಸೇರಿದ ನೌಕರರಿಗೆ ಹಿಂದಿನ ಡಿಫೈನ್ಡ್ ಪಿಂಚಣಿ ಯೋಜನೆಗೆ ಒಳಪಡಿಸಲು ಒಂದು ಬಾರಿಯ ಆಯ್ಕೆಯ ಅವಕಾಶವನ್ನು ಕಲ್ಪಿಸಿ ದಿನಾಂಕ:31.08.2023 ರೊಳಗೆ ಆಯ್ಕೆ ಮಾಡಿಕೊಳ್ಳಲು ಕೇಂದ್ರ ಸರ್ಕಾರದ ದಿನಾಂಕ:03.03.2023ರ ಅಧಿಕೃತ ಜ್ಞಾಪನದಲ್ಲಿ ಮಾರ್ಗಸೂಚಿಗಳನ್ನು ಹೊರಡಿಸಿದೆ. ಓದಲಾದ

ಕ್ರಮ ಸಂಖ್ಯೆ(3)ರ ಸರ್ಕಾರಿ ಆದೇಶದನ್ವಯ ರಾಜ್ಯ ಸರ್ಕಾರದ ಸೇವೆಯಲ್ಲಿರುವ ಅಖಿಲ ಭಾರತ ಸೇವೆಗೆ ಸೇರಿದ ಅರ್ಹ ಅಧಿಕಾರಿಗಳನ್ನು ಹಿಂದಿನ ಡಿಫೈನ್ಡ್ ಪಿಂಚಣಿ ಯೋಜನೆಗೆ ಒಳಪಡಿಸಿ ಆದೇಶಿಸಿದೆ.

ಕೇಂದ್ರ ಸರ್ಕಾರದ ದಿನಾಂಕ: 03.03.2023ರ ಅಧಿಕೃತ ಜ್ಞಾಪನದಲ್ಲಿ ಸಂಬಂಧಿತ ಕೇಂದ್ರ ಸರ್ಕಾರಿ ನೌಕರರಿಗೆ ಕಲ್ಪಿಸಲಾದ ಸೌಲಭ್ಯವನ್ನು ಅದೇ ಸನ್ನಿವೇಶದಲ್ಲಿರುವ ರಾಜ್ಯ ಸರ್ಕಾರಿ ನೌಕರರಿಗೂ ಅನ್ವಯಿಸಲು ತೀರ್ಮಾನಿಸಿದ ಸರ್ಕಾರವು ದಿನಾಂಕ: 01.04.2006ರ ಪೂರ್ವದಲ್ಲಿನ ನೇಮಕಾತಿ ಅಧಿಸೂಚನೆಗಳ ಮೂಲಕ ಆಯ್ಕೆ ಹೊಂದಿ ಆ ದಿನಾಂಕದಂದು ಅಥವಾ ತದನಂತರದಲ್ಲಿ ರಾಜ್ಯ ಸರ್ಕಾರದ ಸೇವೆಗೆ ಸೇರಿದ ನೌಕರರನ್ನು ಹಳೆಯ ಡಿಫೈನ್ಡ್ ಪಿಂಚಣಿ ಯೋಜನೆ ವ್ಯಾಪ್ತಿಗೆ ಒಳಪಡಿಸಲು ಸಂಬಂಧಪಟ್ಟ ಸರ್ಕಾರಿ ನೌಕರರಿಂದ ಅಭಿಮತವನ್ನು ಪಡೆದು ಕ್ರಮಕೈಗೊಳ್ಳುವುದು ಸೂಕ್ತವೆಂದು ಪರಿಗಣಿಸಿ ಈ ಕೆಳಕಂಡಂತೆ ಆದೇಶಿಸಿದೆ.

<u>ಸರ್ಕಾರಿ ಆದೇಶ ಸಂಖ್ಯೆ:ಆಇ-ಪಿಇಎನ್/99/2023, ಬೆಂಗಳೂರು, ದಿನಾಂಕ: 24.01.2024.</u>

ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳ ಹಿನ್ನೆಲೆಯಲ್ಲಿ ದಿನಾಂಕ: 01.04.2006ರ ಪೂರ್ವದಲ್ಲಿ ರಾಜ್ಯ ಸಿವಿಲ್ ಸೇವೆಗಳಲ್ಲಿನ ಖಾಲಿ ಹುದ್ದೆಗಳ ಭರ್ತಿಗಾಗಿ ಹೊರಡಿಸಿದ ನೇಮಕಾತಿ ಅಧಿಸೂಚನೆಗಳ ಮೇರೆಗೆ ಆಯ್ಕೆ ಹೊಂದಿ ದಿನಾಂಕ: 01.04.2006ರಂದು ಅಥವಾ ಆ ದಿನಾಂಕದ ನಂತರ ಸೇವೆಗೆ ಸೇರಿರುವ ಕಾರಣದಿಂದ ನೂತನ ಅಂಶದಾಯಿ ಕೊಡುಗೆ ಯೋಜನೆಯ (ರಾಷ್ಟ್ರೀಯ ಪಿಂಚಣಿ ಯೋಜನೆ) ವ್ಯಾಪ್ತಿಗೊಳಪಟ್ಟಿರುವ ಸರ್ಕಾರಿ ನೌಕರರನ್ನು ಸರ್ಕಾರವು ಅವರ ಅಭಿಮತದ ಮೇರೆಗೆ ಕೆಳಕಂಡ ಷರತ್ತುಗಳಿಗೊಳಪಟ್ಟು ಒಂದು ಬಾರಿಯ ಕ್ರಮವಾಗಿ ಹಿಂದಿನ ಡಿಫೈನ್ಡ್ ಪಿಂಚಣಿ ಯೋಜನೆಯ ವ್ಯಾಪ್ತಿಗೊಳಪಡಿಸಲು ಒಪ್ಪಿಗೆ ನೀಡಿದೆ:-

1. ದಿನಾಂಕ: 01.04.2006ರ ಪೂರ್ವದಲ್ಲಿನ ನೇಮಕಾತಿ ಅಧಿಸೂಚನೆಗಳ ಮೂಲಕ ಆಯ್ಕೆ ಹೊಂದಿ ಆ ದಿನಾಂಕದಂದು ಅಥವಾ ತದನಂತರದಲ್ಲಿ ರಾಜ್ಯ ಸರ್ಕಾರದ ಸೇವೆಗೆ ಸೇರಿದ ಸರ್ಕಾರಿ ನೌಕರರು ಹಿಂದಿನ ಡಿಫೈನ್ಡ್ ಪಿಂಚಣಿ ಯೋಜನೆಗೆ ಒಳಪಡಲು ಇಚ್ಛಿಸಿದಲ್ಲಿ ತಮ್ಮ ಅಭಿಮತವನ್ನು ನಿಗಧಿತ ನಮೂನೆಯಲ್ಲಿ ದಿನಾಂಕ: 30.06.2024ರೊಳಗೆ ಸಕ್ಷಮ ನೇಮಕಾತಿ ಪ್ರಾಧಿಕಾರಕ್ಕೆ ನೇರವಾಗಿ ಸಲ್ಲಿಸತಕ್ಕದ್ದು. ಈ ಆಯ್ಕೆಯನ್ನು ಒಂದು ಬಾರಿಗೆ ಮಾತ್ರ ಚಲಾಯಿಸಲು ಅವಕಾಶವಿರುತ್ತದೆ.
2. ಒಂದು ಬಾರಿ ಮಾಡಿಕೊಂಡ ಆಯ್ಕೆಯನ್ನು ಬದಲಾಯಿಸಲು ಅವಕಾಶವಿಲ್ಲ.
3. ಮೇಲಿನ 1 ರಂತೆ ಆಯ್ಕೆಯನ್ನು ಚಲಾಯಿಸಲು ಅರ್ಹ ಸರ್ಕಾರಿ ನೌಕರರು ನಿಗಧಿತ ದಿನಾಂಕದೊಳಗೆ ತಮ್ಮ ಆಯ್ಕೆಯನ್ನು ಚಲಾಯಿಸದೇ ಇದ್ದಲ್ಲಿ ರಾಷ್ಟ್ರೀಯ ಪಿಂಚಣಿ ಯೋಜನೆಯಲ್ಲಿ ಮುಂದುವರೆಯುತ್ತಾರೆ.
4. ನೌಕರರ ಆಯ್ಕೆಗನುಸಾರ ಅವರು ಹಿಂದಿನ ಡಿಫೈನ್ಡ್ ಪಿಂಚಣಿ ಯೋಜನೆಗೊಳಪಡಲು ನಿಗಧಿತ ಅರ್ಹತೆಯನ್ನು ಹೊಂದಿರುವುದನ್ನು ಸಕ್ಷಮ ನೇಮಕಾತಿ ಪ್ರಾಧಿಕಾರವು ಖಚಿತಪಡಿಸಿಕೊಂಡು ದಿನಾಂಕ: 31.07.2024 ರೊಳಗಾಗಿ ಅಂತಹ ನೌಕರರನ್ನು ಹಿಂದಿನ ಡಿಫೈನ್ಡ್ ಪಿಂಚಣಿ ಯೋಜನೆಗೊಳಪಡಿಸಲು ಶಿಫಾರಸ್ಸಿನೊಂದಿಗೆ ಇಲಾಖಾ ಮುಖ್ಯಸ್ಥರಿಗೆ ಕ್ರೋಢೀಕೃತ ಪ್ರಸ್ತಾವನೆಯನ್ನು ಸಲ್ಲಿಸತಕ್ಕದ್ದು.

5. ಇಲಾಖಾ ಮುಖ್ಯಸ್ಥರು ತಮ್ಮ ಅಧೀನದ ಎಲ್ಲಾ ನೇಮಕಾತಿ ಪ್ರಾಧಿಕಾರಗಳಿಂದ ಸ್ವೀಕೃತವಾದ ಪ್ರಸ್ತಾವನೆಗಳನ್ನು ಪರಿಶೀಲಿಸಿ ಹಿಂದಿನ ಡಿಫೈನ್ಸ್ ಪಿಂಚಣಿ ಯೋಜನೆಗೆ ಒಳಪಡಲು ಅರ್ಹ ನೌಕರರ ಪಟ್ಟಿಯನ್ನು ದಿನಾಂಕ: 31.08.2024ರೊಳಗೆ ಆರ್ಥಿಕ ಇಲಾಖೆಯ ಅನುಮೋದನೆಗಾಗಿ ಸಲ್ಲಿಸತಕ್ಕದ್ದು.

6. ದಿನಾಂಕ: 01.04.2006ರ ಪೂರ್ವದಲ್ಲಿನ ರಾಜ್ಯ ಸಿವಿಲ್ ಸೇವೆಯಲ್ಲಿನ ಖಾಲಿ ಹುದ್ದೆಗಳಿಗೆ ಹೊರಡಿಸಲಾದ ನೇಮಕಾತಿ ಅಧಿಸೂಚನೆಯನ್ವಯ ಆಯ್ಕೆಯಾಗಿ ಕರ್ತವ್ಯಕ್ಕೆ ವರದಿ ಮಾಡಿಕೊಂಡು ತದನಂತರ ಸಮುಚಿತ ಮಾರ್ಗದಲ್ಲಿ ಅರ್ಜಿಯನ್ನು ಸಲ್ಲಿಸಿ ಸರ್ಕಾರದ ಅನ್ಯ ಇಲಾಖೆಯಲ್ಲಿನ ಹುದ್ದೆಗೆ ನೇಮಕಾತಿ ಹೊಂದಿದ ಅರ್ಹ ಸರ್ಕಾರಿ ನೌಕರರು ಹಿಂದಿನ ಡಿಫೈನ್ಸ್ ಪಿಂಚಣಿ ಯೋಜನೆ ಸೌಲಭ್ಯ ಪಡೆದುಕೊಳ್ಳಲು ಇಚ್ಛಿಸಿದಲ್ಲಿ ಮನವಿಯನ್ನು ಹಿಂದಿನ ನೇಮಕಾತಿ ಪ್ರಾಧಿಕಾರಕ್ಕೆ ದಿನಾಂಕ: 30.06.2024ರೊಳಗಾಗಿ ಸಲ್ಲಿಸತಕ್ಕದ್ದು. ನೇಮಕಾತಿ ಪ್ರಾಧಿಕಾರವು ಅಂತಹ ಸರ್ಕಾರಿ ನೌಕರನು ಸಮುಚಿತ ಮಾರ್ಗದಲ್ಲಿ ಅರ್ಜಿ ಸಲ್ಲಿಸಿ ಅನ್ಯ ಇಲಾಖೆಗೆ ಆಯ್ಕೆಯಾದ ಹುದ್ದೆಗೆ ವರದಿಮಾಡಿಕೊಳ್ಳುವ ಸಲುವಾಗಿ ಬಿಡುಗಡೆ ಹೊಂದಿರುವುದನ್ನು ಖಚಿತಪಡಿಸಿಕೊಂಡು ಮೇಲಿನ ಕ್ರಮ ಸಂಖ್ಯೆ (4) ರಂತೆ ಪರಿಶೀಲಿಸಿ ಮೇಲಿನ ಕ್ರಮ ಸಂಖ್ಯೆ (5) ರಂತೆ ಮುಂದಿನ ಕ್ರಮಕ್ಕಾಗಿ ಕಳುಹಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ
(ಅರುಳ್ ಕುಮಾರ್. ಕೆ.ಎ.ಎಸ್.)
ಸರ್ಕಾರದ ಉಪ ಕಾರ್ಯದರ್ಶಿ
(ಆಡಳಿತ ಮತ್ತು ಸಮನ್ವಯ)
ಆರ್ಥಿಕ ಇಲಾಖೆ

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297



**ಸರ್ಕಾರಿ ಆದೇಶ ಸಂಖ್ಯೆ: ಆಇ-ಪಿಇಎನ್/99/2023, ದಿನಾಂಕ: 24.01.2024ಕ್ಕೆ ಅನುಬಂಧ**

**ನಮೂನೆ**

ರವರಿಗೆ,

*(ಅಧಿಕಾರಿ/ನೌಕರರ ಸಂಬಂಧಪಟ್ಟ ನೇಮಕಾತಿ ಪ್ರಾಧಿಕಾರ)*

.................................... ಇಲಾಖೆ,

..............................

ಮಾನ್ಯರೇ,

ವಿಷಯ: ದಿನಾಂಕ:01.04.2006ರ ಪೂರ್ವದಲ್ಲಿನ ನೇಮಕಾತಿ ಅಧಿಸೂಚನೆಗಳ ಮೂಲಕ ಆಯ್ಕೆ ಹೊಂದಿ ಆ ದಿನಾಂಕದಂದು ಅಥವಾ ನಂತರದಲ್ಲಿ ರಾಜ್ಯ ಸರ್ಕಾರದ ಸೇವೆಗೆ ಸೇರಿದ ನೌಕರರನ್ನು ಹಿಂದಿನ ಡಿಫೈನ್ಡ್ ಪಿಂಚಣಿ ಯೋಜನೆಗೆ ಒಳಪಡಿಸುವ ಕುರಿತು.

ಉಲ್ಲೇಖ: ಸರ್ಕಾರಿ ಆದೇಶ ಸಂ: ಆಇ-ಪಿಇಎನ್/99/2023, ದಿನಾಂಕ: 24.01.2024

•••••••

........................................................ ಇಲಾಖೆಯಲ್ಲಿ ...................................... ಆಗಿ ಕಾರ್ಯನಿರ್ವಹಿಸುತ್ತಿರುವ ಶ್ರೀ/ಶ್ರೀಮತಿ.............................................................. ಆದ ನಾನು, ಪ್ರಪ್ರಥಮವಾಗಿ ............................................ ಇಲಾಖೆಯಲ್ಲಿ ...................................... ಹುದ್ದೆಗೆ ದಿನಾಂಕ:........................ ರಂದು ಸರ್ಕಾರಿ ಸೇವೆಯಲ್ಲಿ ವರದಿ ಮಾಡಿಕೊಂಡಿರುತ್ತೇನೆ. ಈ ಹುದ್ದೆಗೆ ನೇಮಕಾತಿ ಅಧಿಸೂಚನೆಯ ಪ್ರಕಟಣೆಯನ್ನು ದಿನಾಂಕ: ........................ ರಂದು ಹೊರಡಿಸಲಾಗಿರುತ್ತದೆ. ನಾನು ಉಲ್ಲೇಖಿತ ಆದೇಶದನ್ವಯ ಹಿಂದಿನ ಡಿಫೈನ್ಡ್ ಪಿಂಚಣಿ ಯೋಜನೆಯ ವ್ಯಾಪ್ತಿಗೊಳಪಡಲು ಅರ್ಹವಿರುವುದರಿಂದ ಹಿಂದಿನ ಡಿಫೈನ್ಡ್ ಪಿಂಚಣಿ ಯೋಜನೆಗೊಳಪಡಿಸಲು ನನ್ನ ಅಭಿಮತವನ್ನು ಈ ಮೂಲಕ ತಿಳಿಸುತ್ತಾ, ಈ ಕೆಳಕಂಡ ಮಾಹಿತಿ / ದಾಖಲೆಗಳನ್ನು ಇದರೊಂದಿಗೆ ಸಲ್ಲಿಸುತ್ತಿದ್ದೇನೆ:

01 ಹುದ್ದೆಗಳ ಭರ್ತಿಗಾಗಿ ಪ್ರಕಟಿಸಲಾದ ನೇಮಕಾತಿ ಅಧಿಸೂಚನೆ ದಿನಾಂಕ:...............ರ ಪ್ರತಿಯನ್ನು ಲಗತ್ತಿಸಿದೆ.

02 ಸಂಬಂಧಪಟ್ಟ ಆಯ್ಕೆ ಪಟ್ಟಿ ದಿನಾಂಕ:...............ರ ಪ್ರತಿಯನ್ನು ಲಗತ್ತಿಸಿದೆ.

03 ನೇಮಕಾತಿ ಆದೇಶ ದಿನಾಂಕ:...............ರ ಪ್ರತಿಯನ್ನು ಲಗತ್ತಿಸಿದೆ

04 ನೇಮಕಾತಿಯ ನಂತರ ಇಲಾಖೆ ಬದಲಾವಣೆಯಾಗಿದೆಯೇ? ವಿವರಗಳನ್ನು ನೀಡುವುದು

05 ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಕಚೇರಿ/ಇಲಾಖೆಯ ವಿಳಾಸ:

06 ಕೆಜಿಐಡಿ ಸಂಖ್ಯೆ :

07 NPS ಪ್ರಾನ್ ಸಂಖ್ಯೆ:

08 ಪ್ರಸ್ತುತ ವೇತನ ಚೀಟಿ:

*(ಸಹಿ ಮತ್ತು ಹೆಸರು)*

ದಿನಾಂಕ:

ಮುದ್ರಕರು ಹಾಗೂ ಪ್ರಕಾಶಕರು– ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು

THAMMAIAH